ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 10/03/2020


# ಯೋಜನೆ ವಿಳಂಬವಾದ್ರೆ ಯಾವ ತ್ಯಾಗಕ್ಕೂ ಸಿದ್ಧ

## ಕೃಷ್ಣಾ ಮೇಲ್ದಂಡೆ ಯೋಜನೆ ಅನುಷ್ಠಾನಕ್ಕೆ ಸರ್ಕಾರ ಕ್ರಮ ಕೈಗೊಳ್ಳಲಿ: ಎಸ್.ಆರ್. ಪಾಟೀಲ

ಉದಯವಾಣಿ 10/3/20



**ವಿಧಾನ ಪರಿಷತ್ತು:** ಕೃಷ್ಣಾ ಮೇಲ್ದಂಡೆ ಯೋಜನೆ ಮೂರನೇ ಹಂತವನ್ನು 'ರಾಷ್ಟ್ರೀಯ ಯೋಜನೆ'ಯಾಗಿ ಘೋಷಿಸುವ ನೆಪದಲ್ಲಿ ಅನುಷ್ಠಾನಕ್ಕೆ ವಿಳಂಬ ಮಾಡಿದರೆ, ನಾವು ಯಾವ ತ್ಯಾಗಕ್ಕೂ ಸಿದ್ಧರಾಗಬೇಕಾಗುತ್ತದೆ' ಎಂದು ಪ್ರತಿಪಕ್ಷ ನಾಯಕ ಎಸ್.ಆರ್. ಪಾಟೀಲ ಗುಡುಗಿದರು.

ಮೇಲ್ಮನೆಯಲ್ಲಿ ಸೋಮವಾರ ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಯಲ್ಲಿ ಮಾತನಾಡಿ, ಈಗಾಗಲೇ ಯೋಜನೆ ಅನುಷ್ಠಾನದಲ್ಲಿ ಸಾಕಷ್ಟು ವಿಳಂಬವಾಗಿದೆ. ಈಗ ಪುನಃ 'ರಾಷ್ಟ್ರೀಯ ಯೋಜನೆ'ಯಾಗಿ ಘೋಷಿಸುವ ನೆಪದಲ್ಲಿ ತಡವಾದರೆ, ಯಾವ ತ್ಯಾಗಕ್ಕೂ ಸಿದ್ಧರಾಗಬೇಕಾಗುತ್ತದೆ.



ಅಷ್ಟಕ್ಕೂ ರಾಷ್ಟ್ರೀಯ ಯೋಜನೆ ಎಂದು ಘೋಷಿಸುವ ಅಗತ್ಯವೂ ಇಲ್ಲ. ಹಾಗಾಗಿ ರಾಜ್ಯ ಸರ್ಕಾರ ತಡಮಾಡದೆ ತಕ್ಷಣದಿಂದ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಮೊದಲೆರಡು ಹಂತಗಳ ಅನುಷ್ಠಾನಕ್ಕಾಗಿ 2.73 ಲಕ್ಷ ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳಲಾಗಿದೆ. 176 ಹಳ್ಳಿಗಳು ಮುಳುಗಡೆಯಾಗಿದ್ದು, ಶಾಶ್ವತವಾಗಿ ಅವುಗಳಿಗೆ ಪುನರ್‌ವಸತಿ ಕಲ್ಪಿಸಲಾಗಿದೆ. 25 ಸಾವಿರ ಮನೆಗಳನ್ನು ಸ್ಥಳಾಂತರಿಸಲಾಗಿದೆ. ಇದೆಲ್ಲವೂ ರಾಜ್ಯ ಸರ್ಕಾರ ತನ್ನ ಹಣದಲ್ಲೇ ಮಾಡಿ ಮುಗಿಸಿದೆ. 3ನೇ ಹಂತದಲ್ಲಿ 1.30 ಲಕ್ಷ ಎಕರೆ ಭೂಸ್ವಾಧೀನ ಹಾಗೂ ಕೇವಲ 20 ಹಳ್ಳಿಗಳಿಗೆ ಪುನರ್‌ವಸತಿ ಕಲ್ಪಿಸಬೇಕಾಗಿದೆ. ಇದನ್ನು 'ರಾಷ್ಟ್ರೀಯ ಯೋಜನೆ' ಘೋಷಿಸುವುದರ ಹಿಂದೆ ಕೇಂದ್ರ ಸರ್ಕಾರವೇ ಮಾಡಿದ್ದು ಎಂದು ಬಿಂಬಿಸುವ ಹುನ್ನಾರ ಇದೆ ಎಂದು ಆರೋಪಿಸಿದರು.

ನಂತರ ಮಾತನಾಡಿದ ಜೆಡಿಎಸ್ ಸದಸ್ಯ ತಿಪ್ಪೇಸ್ವಾಮಿ, 'ರಾಷ್ಟ್ರೀಯ ಯೋಜನೆ'ಯಾಗಿ ಘೋಷಿಸುವುದು ಸೂಕ್ತ. ಇದರಿಂದ ಶೇ.90ರಷ್ಟು ಅನುದಾನವನ್ನು ಕೇಂದ್ರವೇ ಭರಿಸಲಿದೆ. ಈಗಾಗಲೇ ದೇಶದ ಐದಾರು ಪ್ರಮುಖ ನೀರಾವರಿ ಯೋಜನೆಗಳನ್ನು ಕೇಂದ್ರ ಹೀಗೆ ಘೋಷಿಸಿ, ಅನುದಾನ ಒದಗಿಸಿದೆ. ಈ ಹಿಂದೆ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಕೂಡ ಈ ಸಂಬಂಧ ಕೇಂದ್ರಕ್ಕೆ ಪತ್ರ ಬರೆದಿದ್ದರು ಎಂದು ಗಮನಕ್ಕೆ ತಂದರು.

ಇದಕ್ಕೆ ಪ್ರತಿಕ್ರಿಯಿಸಿದ ಎಸ್.ಆರ್. ಪಾಟೀಲ್, ಕೇಂದ್ರ ಅನುದಾನ ನೀಡುವುದಾದರೆ ಸ್ವಾಗತ. ಆದರೆ, ಅದೇ ನೆಪದಲ್ಲಿ ತಡ ಮಾಡಿದರೆ ಕೇಳುವುದಿಲ್ಲ. ಯಾಕೆಂದರೆ, ಈಗಾಗಲೇ ಆರು ದಶಕ ಕಳೆದಿವೆ. 75 ಸಾವಿರ ಕೋಟಿ ಮೊತ್ತದ ಈ ಯೋಜನೆಗೆ ಸರ್ಕಾರ ಒಟ್ಟಾರೆ ಬಜೆಟ್‌ನ ಶೇ. 10ರಷ್ಟು ಅನುದಾನ ಮೀಸಲಿಡಬೇಕು. ಸತತ ಮೂರು ವರ್ಷ ಹೀಗೆ ಮಾಡಿದರೆ, ಯೋಜನೆ ಪೂರ್ಣಗೊಳ್ಳುತ್ತದೆ. ಇದರಿಂದ ಉತ್ತರ ಕರ್ನಾಟಕದ ಭಾಗ್ಯದ ಬಾಗಿಲು ತೆರೆಯುತ್ತದೆ. ದಕ್ಷಿಣದಷ್ಟೇ ಕೊಡುಗೆಯನ್ನು ಉತ್ತರವೂ ನೀಡಲಿದೆ ಎಂದು ಹೇಳಿದರು.

**14 ಸಾವಿರ ಅವ್ಯವಹಾರ; 28 ಸಾವಿರ ಓಕೆ?:** ಇದೇ ವೇಳೆ ಹಿಂದಿನ ಮತ್ತು ಇಂದಿನ ಸರ್ಕಾರಗಳು ದುಬಾರಿ ಮೊತ್ತದಲ್ಲಿ ಲ್ಯಾಪ್‌ಟಾಪ್ ಖರೀದಿಸಿರುವುದೂ ಚರ್ಚೆಗೆ ಗ್ರಾಸವಾಯಿತು. 'ಹಿಂದಿನ ಸರ್ಕಾರವು ಲ್ಯಾಪ್‌ಟಾಪ್‌ಗೆ ಖರೀದಿಗೆ ಟೆಂಡರ್ ಕೂಡ ಕರೆದಿರಲಿಲ್ಲ, ಆದರೆ, ಹತ್ತು ಸಾವಿರ ಮೊತ್ತದ ಲ್ಯಾಪ್‌ಟಾಪ್ ಅನ್ನು 14 ಸಾವಿರಕ್ಕೆ ಪಡೆಯುತ್ತಿದ್ದು, ಲ್ಯಾಪ್‌ಟಾಪ್‌ನಲ್ಲಿ ಅವ್ಯವಹಾರ ನಡೆದಿದೆ ಎಂದು ಈಗಿನ ಆಡಳಿತ ಪಕ್ಷ ಬಿಜೆಪಿ ಆರೋಪಿಸಿತ್ತು. ಆದರೆ, ಈಗ ಅದೇ ಬಿಜೆಪಿ ಸರ್ಕಾರವು 28 ಸಾವಿರ ರೂ. ಕೊಟ್ಟು ಖರೀದಿಸುತ್ತಿದೆ' ಎಂದು ಪ್ರತಿಪಕ್ಷದ ಸದಸ್ಯರು ಆರೋಪಿಸಿದರು.

### ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ಕೇಂದ್ರ ಸಚಿವರ ಭೇಟಿ: ಸಿಎಂ ಯಡಿಯೂರಪ್ಪ

**ವಿಧಾನ ಪರಿಷತ್:** ಕೃಷ್ಣಾ ಮೇಲ್ದಂಡೆ ಯೋಜನೆ 3ನೇ ಹಂತದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಸಂಬಂಧಪಟ್ಟ ಸಚಿವರೊಂದಿಗೆ ಹಾಗೂ ಅಧಿಕಾರಿಗಳ ಜತೆ ಖುದ್ದು ಮಾತುಕತೆ ನಡೆಸಲಿದ್ದೇನೆಂದು ಮುಖ್ಯಮಂತ್ರಿ ಯಡಿಯೂರಪ್ಪ ಭರವಸೆ ನೀಡಿದರು.

ಸದನದಲ್ಲಿ ಉತ್ತರ ನೀಡಿದ ಅವರು, ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಐದು ವರ್ಷ, ಕುಮಾರಸ್ವಾಮಿ ನೇತೃತ್ವದಲ್ಲಿ ಒಂದೂವರೆ ವರ್ಷ ರಾಜ್ಯದಲ್ಲಿ ಅಧಿಕಾರ ನಡೆಸಿದ್ದಾರೆ. ಕೃಷ್ಣಾ ಮೇಲ್ದಂಡೆ ಯೋಜನೆಯ 3ನೇ ಹಂತದ ಕಾಮಗಾರಿಗೆ ಅನುದಾನ ಮೀಸಲಿರಿಸಿರಲಿಲ್ಲ. ಆದರೆ, ಇದೀಗ ಅನುದಾನ ನೀಡುವಂತೆ ಸಲಹೆ ನೀಡಲಾಗುತ್ತಿದೆ. ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುತ್ತಿದ್ದಂತೆ ಯೋಜನೆ ಅಭಿವೃದ್ಧಿಗೆ ಸಲಹೆಗಳನ್ನು ನೀಡಲಾಗುತ್ತಿದೆ. ಹೀಗಾದಲ್ಲಿ ಯೋಜನೆ ಜಾರಿ ಮಾಡುವುದಾದರೂ ಹೇಗೆ ಎಂಬ ಯಕ್ಷಪ್ರಶ್ನೆನನ್ನು ಕಾಡುತ್ತಿದೆ. ನಮ್ಮ ಆರ್ಥಿಕ ಪರಿಸ್ಥಿತಿಯ ಇತಿಮಿತಿಯೊಳಗೆ ಕಾರ್ಯಾನುಷ್ಠಾನ ಮಾಡಲಿದ್ದೇವೆ ಎಂದರು.

ಕೃಷ್ಣಾ ಮೇಲ್ದಂಡೆಯ 3ನೇ ಹಂತದ ಕಾಮಗಾರಿಗೆ ಪ್ರಸಕ್ತ ಬಜೆಟ್‌ನಲ್ಲಿ ಹಣ ಮೀಸಲಿಟ್ಟಿರಲಿಲ್ಲ. ಆದರೂ, ಹಣಕಾಸು ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ 10 ಸಾವಿರ ಕೋಟಿ ರೂ. ಮೀಸಲಿಡಲಾಗಿದೆ. ಅಲ್ಲದೆ, ಹಂತ ಹಂತವಾಗಿ ಯೋಜನೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಎಂದು ಮಾಹಿತಿ ನೀಡಿದರು.